# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 165

ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 28.01.2026

ಉತ್ತರಿಸುವ ಸಚಿವರು : ಕಂದಾಯ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪ್ರಸ್ತುತ ಎಷ್ಟು ಸರ್ಕಾರಿ ಭೂಮಿ ಒತ್ತುವರಿಯಾಗಿದೆ;</td><td>ಪ್ರಸ್ತುತ ಒಟ್ಟು 1506415 ಎಕರೆ ಸರ್ಕಾರಿ ಜಮೀನಿನ ಒತ್ತುವರಿಯನ್ನು ಗುರುತಿಸಲಾಗಿದೆ.</td></tr>
<tr><td>ಆ)</td><td>ಕಳೆದ ವರ್ಷದಲ್ಲಿ ಅಕ್ರಮ ಒತ್ತುವರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;</td><td rowspan="3">ರಾಜ್ಯದಲ್ಲಿ ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಸಂರಕ್ಷಣೆಗಾಗಿ ಸರ್ಕಾರವು ಈ ಕೆಳಕಂಡಂತೆ ಕ್ರಮ ಕೈಗೊಂಡಿರುತ್ತದೆ.<br><br>1. ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br>2. ಬೀಟ್ ತಂತ್ರಾಂಶ (Beat App): ಸರ್ಕಾರಿ ಜಮೀನುಗಳನ್ನು ಗುರುತಿಸಿ Geofencing ಮಾಡಿ ಒತ್ತುವರಿಗಳಿಂದ ರಕ್ಷಣೆ ಮಾಡುವ ಸಲುವಾಗಿ ಬೀಟ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿರುತ್ತದೆ. ಇದರಿಂದಾಗಿ ಎಲ್ಲಾ ರೀತಿಯ ಸರ್ಕಾರಿ ಜಮೀನುಗಳನ್ನು ಗುರುತಿಸಿ Geofenicing ಹದ್ದುಬಸ್ತು ಮೂಲಕ ಒತ್ತುವರಿಗಳನ್ನು ಗುರುತಿಸಲಾಗುತ್ತದೆ. ನಂತರ ಸದರಿ ಒತ್ತುವರಿಗಳನ್ನು ತೆರವುಗೊಳಿಸಲು ಮತ್ತು ತಂತ್ರಾಂಶದಲ್ಲಿ ಇಂದೀಕರಿಸಲು ಅವಕಾಶ ನೀಡಲಾಗುತ್ತದೆ. ಸದರಿ ಸರ್ಕಾರಿ ಜಮೀನುಗಳ ಅನಧಿಕೃತ ಒತ್ತುವರಿಯನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು ಪ್ರತಿ 3 ತಿಂಗಳಿಗೊಮ್ಮೆ ಸ್ಥಳ ಪರಿಶೀಲನೆ ಮಾಡಿ, ವಿಡಿಯೋ ಮಹಜರ್ ಮತ್ತು ಭಾವಚಿತ್ರಗಳನ್ನು ಅಪ್ಲೋಡ್ (Upload) ಮಾಡಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ರೀತಿಯಾಗಿ ಸರ್ಕಾರಿ ಜಮೀನುಗಳನ್ನು ರಕ್ಷಿಸಲು ನಿರಂತರ ಪರಿವೀಕ್ಷಣೆ ಹಾಗೂ ಮೇಲ್ವಿಚಾರಣೆ ಮಾಡಲು ತಂತ್ರಾಂಶವು</td></tr>
<tr><td>ಇ)</td><td>ರಾಜಕೀಯ ಅಥವಾ ಪ್ರಭಾವಿ ಒತ್ತುವರಿಗಳಿವೆಯೇ ಮತ್ತು ಅವುಗಳನ್ನು ಹೇಗೆ ನಿರ್ವಹಿಸಲಾಗುತ್ತದೆ;</td></tr>
<tr><td>ಈ)</td><td>ಕೆರೆ, ಅರಣ್ಯ ಮತ್ತು ಗೋಮಾಳ ಭೂ ರಕ್ಷಣೆಯಲ್ಲಿನ ಪ್ರಗತಿ ಏನು?</td></tr>
</table>

| | | |
|---|---|---|
| | | ಸಹಾಯಕಾರಿಯಾಗಿರುತ್ತದೆ.<br>3. ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ ಹಾಗೂ ಅಕ್ರಮವಾಗಿ ಪರಭಾರೆ ಮಾಡುತ್ತಿರುವವರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ FIR ದಾಖಲಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 12 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು